# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಲಕ್ಕಪ್ಪ ಶರಣಪ್ಪ ಹರಿಜನ, ಅಧ್ಯಕ್ಷರು, ರಾಮನಹಳ್ಳಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ ಇವರ ಪತ್ರ ಸಂಖ್ಯೆ: ಜಿಪಂಆ/ಗ್ರಾಪಂ/ಸಿಬ್ಬಂದಿ/ಸಿಆರ್-54/2019-20/1148, ದಿನಾಂಕ: 15-07-2019.
3. ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಬೆ:ಜಿಪಂ:43(ಎ):ಸಿಆರ್-17:2019-20, ದಿ:06.01.2020.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಅದರಂತೆ, ಮೇಲೆ ಓದಲಾದ (2)ರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ ಇವರ ಪತ್ರದಲ್ಲಿ ಶ್ರೀ ಲಕ್ಕಪ್ಪ ಶರಣಪ್ಪ ಹರಿಜನ, ಅಧ್ಯಕ್ಷರು, ರಾಮನಹಳ್ಳಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕೆಳಕಂಡ ಆರೋಪದ ಮೇಲೆ ತನಿಖೆಯನ್ನು ನಡೆಸಲು ಕೋರಿರುತ್ತಾರೆ.

- ಶ್ರೀ ಲಕ್ಕಪ್ಪ ಶರಣಪ್ಪ ಹರಿಜನ, ಅಧ್ಯಕ್ಷರು, ರಾಮನಹಳ್ಳಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ದ ಸಿಂದಗಿ ತಾಲ್ಲೂಕಿನ ರಾಮನಹಳ್ಳಿ ಗ್ರಾಮ ಪಂಚಾಯತಿಯಲ್ಲಿ ಗುಡಳ್ಳಿ ಗ್ರಾಮಕ್ಕೆ ಸಂಬಂಧಿಸಿದಂತೆ 1) ಸನ್ 2015-16ನೇ ಸಾಲಿನ ಬಸವ ವಸತಿ ಯೋಜನೆಯಡಿ ಹಾಗೂ 2015-16, 2016-17 ಮತ್ತು 2017-18ನೇ ಸಾಲಿನಲ್ಲಿ ಡಾ:ಬಿಆರ್. ಅಂಬೇಡ್ಕರ್ ವಸತಿ ಯೋಜನೆಯಡಿಯಲ್ಲಿ, 2) ಸ್ವಚ್ಛ ಭಾರತ ಮಿಷನ್ ಯೋಜನೆಯಡಿಯಲ್ಲಿ ಶೌಚಾಲಯಗಳ ನಿರ್ಮಾಣದ ಕುರಿತಂತೆ, 3) 14ನೇ ಹಣಕಾಸು ಯೋಜನೆಯಡಿಯಲ್ಲಿ ನಿಯಮಬಾಹಿರವಾಗಿ ರೂ.56,000/- ಗಳ ಖರ್ಚು ಭರಿಸಿ ಹಣ ದುರುಪಯೋಗ ಪಡಿಸಿಕೊಂಡಿರುವ ಆರೋಪದ ಬಗ್ಗೆ.

ಮೇಲೆ ಓದಲಾದ ಕ್ರಮಾಂಕ (3)ರ ಪ್ರಸ್ತಾವನೆಯಲ್ಲಿ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ ಬೆಳಗಾವಿ, ಇವರು ತಮ್ಮ ವರದಿಯಲ್ಲಿ ಶ್ರೀ ಲಕ್ಕಪ್ಪ ಶರಣಪ್ಪ ಹರಿಜನ, ಅಧ್ಯಕ್ಷರು, ರಾಮನಹಳ್ಳಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿಚಾರಣೆಯನ್ನು ಜರುಗಿಸಲಾಗಿರುತ್ತದೆ. ವಿಚಾರಣೆ ಸಮಯದಲ್ಲಿ ವಾದಿ ಮತ್ತು ಪ್ರತಿವಾದಿಗಳ ವಾದ ವಿವಾದಗಳನ್ನು ಆಲಿಸಿ ಅವರುಗಳು ಸಲ್ಲಿಸಿದ ಲಿಖಿತ ಹೇಳಿಕೆಯನ್ನು ಹಾಗೂ ಪ್ರಕರಣಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿದ್ದು, ಶ್ರೀ ಲಕ್ಕಪ್ಪ ಶರಣಪ್ಪ ಹರಿಜನ, ಅಧ್ಯಕ್ಷರು, ರಾಮನಹಳ್ಳಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ದಾಖಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಡಾ: ಬಿಆರ್. ಅಂಬೇಡ್ಕರ್ ವಸತಿ ಯೋಜನೆಯಡಿಯಲ್ಲಿ ಜಿ.ಪಿ.ಎಸ್. ಅಳವಡಿಸಿ ಪೂರ್ಣ ಪ್ರಮಾಣದಲ್ಲಿ ಮನೆಯನ್ನು ಕಟ್ಟಿಕೊಂಡಿರುವ ಫಲಾನುಭವಿಗಳಿಗೆ ಹಂತ ಹಂತವಾಗಿ ಅನುದಾನವನ್ನು ನೀಡಿರುವ ಬಗ್ಗೆ ಮತ್ತು ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿಯಲ್ಲಿ ಶೌಚಾಲಯಗಳನ್ನು ಕಟ್ಟಿಸಿಕೊಂಡವರಿಗೆ ಮಾತ್ರ ಹಣವನ್ನು ಮಂಜೂರು ಮಾಡಿರುವ ಬಗ್ಗೆ ಸಲ್ಲಿಸಿದ ದಾಖಲೆಗಳನ್ನು ಪರಿಶೀಲಿಸಲಾಗಿದೆ. ಮುಂದುವರೆದು, ಒಬ್ಬ ಫಲಾನುಭವಿಗೆ 2 ಸಲ ಹಣವನ್ನು ಮಂಜೂರು ಮಾಡಿರುವ ಕುರಿತಾಗಿ ಬ್ಯಾಂಕ್ ದಾಖಲೆಗಳನ್ನು ಪರಿಶೀಲಿಸಿದಾಗ ಬೇರೆ ಬೇರೆ ಖಾತೆಯುಳ್ಳ ಇಬ್ಬರು ಫಲಾನುಭವಿಗಳಿಗೆ ಒಂದೇ ಹೆಸರಿನಡಿ ಹಣ ಮಂಜೂರಾಗಿರುವುದು ದೃಢಪಟ್ಟಿರುತ್ತದೆ. 14ನೇ ಹಣಕಾಸು ಯೋಜನೆಯಡಿ ಕಾಮಗಾರಿಗಳನ್ನು ನಿರ್ವಹಿಸಿದ ಕೆಲಸಗಾರರು ಟಿನ್ ನಂಬರ್ ಹೊಂದಿರದ ಕಾರಣ, ಟಿನ್ ನಂಬರ್ ಹೊಂದಿದ ಹಾಗೂ ಕಾಮಗಾರಿಗಳನ್ನು ನಿರ್ವಹಿಸಿದ ಕಾಂಟ್ರಾಕ್ಟರ್‌ಗಳ ಹೆಸರಿಗೆ ಓಚರ್ ನೀಡಿ ನಂತರ ಹಣವನ್ನು ಕೆಲಸ ನಿರ್ವಹಿಸಿದ ಕೆಲಸಗಾರರಿಗೆ ತಲುಪಿಸಿರುವ ಬಗ್ಗೆ ಸಲ್ಲಿಸಿದ ದಾಖಲೆಗಳನ್ನು ಪರಿಶೀಲಿಸಲಾಗಿ, ಪ್ರಕರಣದಲ್ಲಿ ಎದುರುದಾರರು ಯಾವುದೇ ಗಮನಾರ್ಹ ಅಪರಾಧವನ್ನೆಸಗಿರುವುದು ಕಂಡು ಬಂದಿರುವುದಿಲ್ಲ. ಆದ್ದರಿಂದ, ಸದರಿ ಪ್ರಕರಣವನ್ನು ವಜಾಗೊಳಿಸಲಾಗಿದೆ. ಆದ್ದರಿಂದ ಸದರಿ ಸದಸ್ಯರ ಸದಸ್ಯತ್ವವನ್ನು ಮುಂದುವರೆಸುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣದ ವಿಚಾರಣಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ ಶ್ರೀ ಲಕ್ಕಪ್ಪ ಶರಣಪ್ಪ ಹರಿಜನ, ಅಧ್ಯಕ್ಷರು, ರಾಮನಹಳ್ಳಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಮಾಡಲಾದ ಆರೋಪಗಳು ಸಾಬೀತಾಗಿಲ್ಲದಿರುವ ಹಿನ್ನೆಲೆಯಲ್ಲಿ ಶ್ರೀ ಲಕ್ಕಪ್ಪ ಶರಣಪ್ಪ ಹರಿಜನ, ಅಧ್ಯಕ್ಷರು, ರಾಮನಹಳ್ಳಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ಮೇಲಿನ ಆರೋಪಗಳಿಂದ ಇವರನ್ನು ಆರೋಪಮುಕ್ತಗೊಳಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 72 ಗ್ರಾಪಂಅ 2020 ಬೆಂಗಳೂರು, ದಿನಾಂಕ:10.03.2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಲಕ್ಕಪ್ಪ ಶರಣಪ್ಪ ಹರಿಜನ, ಅಧ್ಯಕ್ಷರು, ರಾಮನಹಳ್ಳಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ರಡಿಯಲ್ಲಿ ನಡೆಸಿರುವ ವಿಚಾರಣೆ

ಯಲ್ಲಿ ಇವರ ಮೇಲೆ ಮಾಡಲಾದ ಆರೋಪಗಳು ಸಾಬೀತಾಗಿಲ್ಲದಿರುವುದರಿಂದ ಇವರನ್ನು ಆರೋಪಮುಕ್ತಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 10/3/2020.

(ಬಿ. ನವೀನ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

RJ 10/3/2020

**ಪ್ರತಿ:**

1) ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ.
2) ಜಿಲ್ಲಾಧಿಕಾರಿ, ವಿಜಯಪುರ ಜಿಲ್ಲೆ, ವಿಜಯಪುರ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ವಿಜಯಪುರ ಜಿಲ್ಲೆ.
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಾಮನಹಳ್ಳಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ.
6) ಶ್ರೀ ಲಕ್ಕಪ್ಪ ಶರಣಪ್ಪ ಹರಿಜನ, ಅಧ್ಯಕ್ಷರು, ರಾಮನಹಳ್ಳಿ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ **(ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಿಂದಗಿ ತಾಲ್ಲೂಕು ವಿಜಯಪುರ ಜಿಲ್ಲೆ ಇವರ ಮುಖಾಂತರ)**

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
4) ಗಣಕ ಕೋಶ.